**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 713/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ09**

**ದಿನಾಂಕಃ 19.02.2026** **ಸಿಡಬ್ಲ್ಯೂ11**

| | |
|---|---|
| ಹೆಸರು | ವೆಂಕಟರಮಣ |
| ತಂದೆ ಹೆಸರು | ಎನ್ ನಾರಾಯಣ |
| ವಯಸ್ಸು | 50 ವರ್ಷ |
| ಉದ್ಯೋಗ | ಹೆಚ್ ಸಿ |
| ವಾಸ ಸ್ಥಳ | ಮಲೆಬೆನ್ನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು 2021 ರಿಂದ ಇಲ್ಲಿಯವರೆಗೆ ಹೆಚ್ ಸಿ ಆಗಿ ಮಲೆಬೆನ್ನೂರು ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 26.10.2021 ರಂದು ಮಧ್ಯಾಹ್ನ 1.00 ಗಂಟೆಗೆ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಗುನ್ನೆ 177/2023 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಪ್ರ ವ ವರದಿಯನ್ನು ನಿಪಿ.11 ಎಂದು ಸಾಕ್ಷಿಯ ಸಹಿಯನ್ನು ನಿಪಿ.11 (ಎ) ಎಂದು ಗುರುತಿಸಲಾಯಿತು.

ದಿಃ 27.10.2021 ರಂದು ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿ ಚಾಸಾ.2 ಮತ್ತು 3 ರವರಿಗೆ ನೋಟಿಸ್ ನೀಡಿ ಪಂಚರ ಸಮಕ್ಷಮ ಬೆಳಿಗ್ಗೆ 9.30 ರಿಂದ 10.30 ರವರೆಗೆ ಸ್ಥಳ ಪಂಚನಾಮೆ ಜರುಗಿಸಿ ಕಚ್ಚಾ ನಕಾಶೆ ತಯಾರಿಸಿ ಛಾಯ ಚಿತ್ರ ತೆಗೆದಿರುತ್ತೇವೆ. ಸಾಕ್ಷಿಯು ಗುರುತಿಸಿದ ಪಂಚನಾಮೆಯನ್ನು ಈಗಾಗಲೇ ನಿಪಿ.4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.4 (ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಕಚ್ಚಾ ನಾಕಶೆಯನ್ನು ಈಗಾಗಲೇ ನಿಪಿ.5 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.5 (ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ಈಗಾಗಲೇ ನಿಪಿ.6 ಎಂದು ಗುರುತಿಸಲಾಗಿದೆ. ಸಾಕ್ಷಿಯು ಗುರುತಿಸಿದ ಪಂಚರಿಗೆ ನೀಡಿದ ನೋಟಿಸನ್ನು ನಿಪಿ.12 ಎಂದು ಸಾಕ್ಷಿಯ ಸಹಿಯನ್ನು ನಿಪಿ.12 (ಎ) ಎಂದು

ಗುರುತಿಸಲಾಯಿತು. ಅದೇ ದಿನ ಚಾಸಾ.2 ಮತ್ತು 3 ರವರ ಹೇಳಿಕೆ ಪಡೆದಿರುತ್ತೇನೆ. ಅದೇ ದಿನ ಚಾಸಾ.1 ರವರ ಮರುಹೇಳಿಕೆ ಪಡೆದಿರುತ್ತೇನೆ. ಚಾಸಾ.1 ರವರ ಹೇಳಿಕೆ ಅನ್ವಯ ಕಲಂ 354 (ಬಿ) ಯನ್ನು ಅಳವಡಿಸಿಕೊಳ್ಳಲು ನ್ಯಾಯಾಲಯಕ್ಕೆ ಮನವಿ ಸಲ್ಲಿಸಿರುತ್ತೇನೆ. ಸಾಕ್ಷಿಯು ಗುರುತಿಸಿದ ಮನವಿಯನ್ನು ನಿಪಿ.13 ಎಂದು ಸಾಕ್ಷಿಯ ಸಹಿಯನ್ನು ನಿಪಿ.13 (ಎ) ಎಂದು ಗುರುತಿಸಲಾಯಿತು. ಅದೇ ದಿನ ಠಾಣಾ ಪಿಸಿ ಜಯಶೀಲಾ ರವರ ಮುಖಾಂತರ ಚಾಸಾ.1 ರವರ 164 ಹೇಳಿಕೆ ಪಡೆಯಲು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಘಟನಾ ಸ್ಥಳದ ಆಸ್ತಿ ಸಂಖ್ಯೆ 184, 241 ರ ದಾಖಲೆಗಳನ್ನು ನೀಡಲು ಪುರಸಭೆ ಮಲೆಬೆನ್ನೂರು ರವರಿಗೆ ಮನವಿ ನೀಡಿರುತ್ತೇನೆ. ಅದೇ ದಿನ ಚಾಸಾ.10 ರವರಿಂದ 65(ಬಿ) ಪ್ರಮಾಣ ಪತ್ರ ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಪ್ರಮಾಣ ಪತ್ರವನ್ನು ನಿಪಿ.14 ಎಂದು ಸಾಕ್ಷಿಯ ಸಹಿಯನ್ನು ನಿಪಿ.14 (ಎ) ಎಂದು ಗುರುತಿಸಲಾಯಿತು.

ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ.13 ರವರಿಗೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಸಹ ಚಾಸಾ.1 ರವರು ನೀಡಿದ ಸುಳ್ಳು ದೂರನ್ನು ದಾಖಲಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಬೇಟಿ ನೀಡಿಲ್ಲ, ಪಂಚನಾಮೆ ಜರುಗಿಸಿಲ್ಲ ಹಾಗೂ ಛಾಯ ಚಿತ್ರ ತೆಗೆದಿಲ್ಲ ಎಂದರೆ ಸರಿಯಲ್ಲ. ಚಾಸಾ.1 ರವರ ಮರುಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಪುರಸಭೆಗೆ ದಾಖಲಾತಿ ಪಡೆಯಲು ಯಾವುದೇ ಮನವಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ.10 ರವರಿಂದ ಯಾವುದೇ ಪ್ರಮಾಣ ಪತ್ರ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಸಹ ನಾನು ಕೂಲಂಕುಷವಾಗಿ ತನಿಖೆ ಮಾಡದೇ ಅವರ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ